ಕರ್ನಾಟಕ ಸರ್ಕಾರ

ಸಂಖ್ಯೆ: ಸಿಐ 194 ಆರ್‌ಐಎಸ್ 2025

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ, ಡಾ|| ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ: 29.04.2026

ಇವರಿಂದ:

ಸರ್ಕಾರದ ಕಾರ್ಯದರ್ಶಿ,
(ಎಂಎಸ್‌ಎಂಇ ಮತ್ತುಗಣಿ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,
ವಿಕಾಸ ಸೌಧ, ಬೆಂಗಳೂರು.

ಇವರಿಗೆ:

1. ಕೈಗಾರಿಕಾಭಿವೃದ್ಧಿ ಆಯುಕ್ತರು, ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯ, ಬೆಂಗಳೂರು.
2. ಆಯುಕ್ತರು ಹಾಗೂ ನಿರ್ದೇಶಕರು, ಗಣಿ &ಭೂವಿಜ್ಞಾನ ಇಲಾಖೆ, ಬೆಂಗಳೂರು.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ &ಜವಳಿ ಇಲಾಖೆ, ಬೆಂಗಳೂರು.
4. ಕಬ್ಬು ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಸಕ್ಕರೆ ಇಲಾಖೆ, ಬೆಳಗಾವಿ

ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು

1. ಮೈಸೂರು ಸಕ್ಕರೆ ಕಾರ್ಖಾನೆ ನಿ.
2. ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ
3. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿ.
4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ
5. ಹಟ್ಟಿ ಚಿನ್ನದ ಗಣಿ ಕಂಪನಿ ನಿ.
6. ಕೆ.ಎಸ್.ಎಂ.ಸಿ.ಎಲ್
7. ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿ.
8. ಕರ್ನಾಟಕ ಚರ್ಮ ತಾಂತ್ರಿಕ ಸಂಸ್ಥೆ
9. ಕೆ.ಐ.ಎ.ಡಿ.ಬಿ.
10. ಕರ್ನಾಟಕ ವ್ಯಾಪಾರ ಉತ್ತೇಜನ ಸಂಸ್ಥೆ
11. ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ
12. ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್ತು
13. ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿ.
14. ಎನ್.ಜಿ.ಇ.ಎಫ್. ಹುಬ್ಬಳ್ಳಿ
15. ಕರ್ನಾಟಕ ಸಾಬೂನು &ಮಾರ್ಜಕ ಲಿ.
16. ಮಾರ್ಕೆಟಿಂಗ್ ಕನ್ಸಲ್ಟೆಂಟ್ಸ್ &ಏಜೆನ್ಸೀಸ್
17. ಮೈಸೂರು ಬಣ್ಣ &ಅರಗು ಲಿ.
18. ಕರ್ನಾಟಕ ರಾಜ್ಯ ತೆಂಗಿನನಾರು ಅಭಿವೃದ್ಧಿ ನಿಗಮ
19. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ
20. ಕರ್ನಾಟಕ ರಾಜ್ಯ ತೆಂಗಿನನಾರಿನ ಸಹಕಾರ ಮಹಾ ಮಂಡಳಿ
21. ಕರ್ನಾಟಕ ಉದ್ಯೋಗ ಮಿತ್ರ
22. ಮೈಸೂರು ಪೇಪರ್ ಮಿಲ್ಸ್ ಲಿಮಿಟೆಡ್
23. ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ
24. ಕರ್ನಾಟಕ ರಾಜ್ಯ ಜವಳಿ ಮೂಲ ಸೌಲಭ್ಯ ಅಭಿವೃದ್ಧಿ ನಿ.ನಿ.

ಮಾನ್ಯರೆ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ / ಅರೆ ಸರ್ಕಾರಿ / ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ನ್ನು ಕಡ್ಡಾಯವಾಗಿ ಬರೆಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ.

ಉಲ್ಲೇಖ: 1. ಸುತ್ತೋಲೆ ಸಂಖ್ಯೆ: ಮುಕಾ / ಮಕ್ಕಳ ಸಹಾಯವಾಣಿ (1098), ದಿನಾಂಕ: 25.09.2025.

2. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ದಿನಾಂಕ: 26.08.2025 ರ ಪತ್ರ

3. ದಿನಾಂಕ: 20.09.2025 ಹಾಗೂ 20.01.2026 ರ ಇದೇ ಸಮ ಸಂಖ್ಯೆಯ ಪತ್ರಗಳು

*****

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸುತ್ತೋಲೆಯಲ್ಲಿ ತಿಳಿಸಿರುವಂತೆ, ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಸಂಖ್ಯೆ (1098) ಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಉಲ್ಲೇಖ (3) ರ ಪತ್ರಗಳಲ್ಲಿ ಈಗಾಗಲೇ ತಿಳಿಸಲಾಗಿತ್ತು. ಆದರೆ ಪರಿಶೀಲನೆಯ ಸಮಯದಲ್ಲಿ ಎಲ್ಲಾ ಕಚೇರಿಗಳಲ್ಲಿ ಈ ಸೂಚನೆಗಳನ್ನು ಪಾಲನೆ ಮಾಡದೇ ಇರುವುದು ಕಂಡುಬಂದಿದ್ದು, ಈ ಕೂಡಲೇ ಉಲ್ಲೇಖ (1) ರ ಸುತ್ತೋಲೆಯಲ್ಲಿನ ಸೂಚನೆಯನ್ವಯ ಮಕ್ಕಳ ಸಹಾಯವಾಣಿ ಸಂಖ್ಯೆ (1098) ಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

29/4/2026

(ಎಸ್ ಅರುಣ್)

ಸರ್ಕಾರದ ಅಧೀನ ಕಾರ್ಯದರ್ಶಿ,

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ,

(ಸೇವೆಗಳು ಮತ್ತು ಸಮನ್ವಯ)

29/4.

**ಕರ್ನಾಟಕ ಸರ್ಕಾರ**

**ಸಂಖ್ಯೆ:** ಸಿಆಸುಇ 246 ರಾಸ 2025

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ. ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:13.01.2026.

**ಅನಧಿಕೃತ ಟಿಪ್ಪಣಿ**

**ವಿಷಯ:-** ರಾಜ್ಯದ ಎಲ್ಲಾಸರ್ಕಾರಿ / ಅರೆ ಸರಕಾರಿ / ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಅನ್ನು ಕಡ್ಡಾಯವಾಗಿ ಬರೆಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ.

**ಉಲ್ಲೇಖ:-**
1. ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಇವರ ಪತ್ರ ದಿನಾಂಕ:26.08.2025
2. ಸರ್ಕಾರದ ಸುತ್ತೋಲೆ ಸಂಖ್ಯೆ: ಮು.ಕಾ/ಮಕ್ಕಳ ಸಹಾಯವಾಣಿ (1098), ದಿನಾಂಕ:25.09.2025

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರ ಹಾಗೂ ಸುತ್ತೋಲೆಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಉಲ್ಲೇಖ (1) ರ ಪತ್ರದಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಸಹಾಯವಾಣಿ ಸಂಖ್ಯೆ: 1098 ಲೋಗೋ ಅನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಕ್ತ ಕ್ರಮವಹಿಸುವಂತೆ ಕೋರಿರುತ್ತಾರೆ. ಈ ಕುರಿತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಉಲ್ಲೇಖ (2) ರ ಸುತ್ತೋಲೆಯನ್ನು ಹೊರಡಿಸಿರುತ್ತದೆ.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಕೋರಿಕೆಯಂತೆ, ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಸಹಾಯವಾಣಿ ಸಂಖ್ಯೆ: 1098 ಲೋಗೋ ಅನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಕ್ತ ಕ್ರಮವಹಿಸುವ ಸಲುವಾಗಿ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

ಸಂದೀಪ್ ಬಿ.ಕೆ.

**(ಸಂದೀಪ್ ಬಿ.ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜಕೀಯ)

**ಇವರಿಗೆ:**

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು



le No. C I/194/RIS/2025-COORD-C&I SEC (Computer No. 1912271)
enerated from eOffice by VARSHA R, C&I-AST1(VR), ASSISTANT, COMMERCE AND INDUSTRIES SECRETARIAT on 29/04/2026 04:17 PM

ಕರ್ನಾಟಕ ಸರ್ಕಾರ

ಸಂಖ್ಯೆ: ಸಂಖ್ಯೆ:ಮು.ಕಾ/ಮಕ್ಕಳ ಸಹಾಯವಾಣಿ(1098)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ. ಅಂಬೇಡ್ಕರ್ ವೀದಿ,
ಬೆಂಗಳೂರು,ದಿನಾಂಕ:25.09.2025.

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ, ಅರೆಸರ್ಕಾರಿ/ಸ್ವಯಂ ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ 1098 ನಾಮ ಫಲಕವನ್ನು ಕಡ್ಡಾಯವಾಗಿ ಅಳವಡಿಸುವ ಕುರಿತು.

ಉಲ್ಲೇಖ: ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರ ಟಿಪ್ಪಣಿ ದಿನಾಂಕ:09.09.2025.

*****

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಿಂದ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಸಂಖ್ಯೆಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ಸೂಕ್ತ ನಿರ್ದೇಶನ ನೀಡುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರನ್ನು ಕೋರಿದ್ದು, ಉಲ್ಲೇಖಿತ ಟಿಪ್ಪಣಿಯಲ್ಲಿ ಸುತ್ತೋಲೆಯನ್ನು ಹೊರಡಿಸಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ತಿಳಿಸಿರುತ್ತಾರೆ.

ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈಗಾಗಲೇ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯೂ ಮಕ್ಕಳ ಅಭಿವೃದ್ಧಿ ಹಾಗೂ ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದ್ದು, ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಿದ್ದಲ್ಲಿ ಬಾಲ್ಯವಿವಾಹ, ಬಾಲ ಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಬಾಲ್ಯವಿವಾಹ, ಪೋಕ್ಸೋ, ಬಾಲಗರ್ಭಿಣಿ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿರುವುದು ಆತಂಕಕಾರಿ ವಿಚಾರವಾಗಿದೆ. ಮಕ್ಕಳ ಸಹಾಯವಾಣಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಕಲ್ಯಾಣ ಸಮಿತಿ ಇತ್ಯಾದಿ ಸುರಕ್ಷಿತ ಬೆಂಬಲ ವ್ಯವಸ್ಥೆ ಇರುವುದರ ಕುರಿತು ಮಕ್ಕಳಿಗೆ ಮಾಹಿತಿ ಇರಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಸಾರ್ವಜನಿಕರು, ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳಿಗೂ ಸಹ ಈ ಕುರಿತು ಮಾಹಿತಿ ಇದ್ದಲ್ಲಿ ಮಕ್ಕಳಿಗೆ ಸಕಾಲದಲ್ಲಿ ಸ್ಪಂದನೆ ಮತ್ತು ಅಗತ್ಯ ಬೆಂಬಲ ಪಡೆಯಲು ಸಾಧ್ಯವಾಗುತ್ತದೆ.

ಈ ಹಿನ್ನೆಲೆಯಲ್ಲಿ ತಮ್ಮ ಅಧೀನದ ಎಲ್ಲಾ ಜಿಲ್ಲಾ, ತಾಲ್ಲೂಕು, ಹೋಬಳಿ, ಗ್ರಾಮ ಪಂಚಾಯಿತಿ ಮತ್ತು ಗ್ರಾಮ ಮಟ್ಟದ ಸರ್ಕಾರಿ ಕಛೇರಿ, ಅರೆಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸ್ವಯಂ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳಲ್ಲಿ ಮಕ್ಕಳ ಸಹಾಯವಾಣಿ 1098 ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಲು ಕ್ರಮವಹಿಸುವಂತೆ ಸೂಚಿಸಿದೆ.

ಸರ್ಕಾರದ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ, ಸೂಕ್ತ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಪೊಲೀಸ್ ಆಯುಕ್ತರು, ಸೂಕ್ತ ಕ್ರಮಕ್ಕಾಗಿ
4. ಎಲ್ಲಾ ಆಯುಕ್ತರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ಸೂಕ್ತ ಕ್ರಮಕ್ಕಾಗಿ
5. ಕಚೇರಿ ಪ್ರತಿ.

ಅಡಕ:

- ಮಕ್ಕಳ ಸಹಾಯವಾಣಿ ಮಾದರಿ ಪ್ರಚಾರ ಮಾಹಿತಿ (content)

ಪ್ರತಿಯನ್ನು ಮಾಹಿತಿಗಾಗಿ:

- ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
- ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು.
- ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು.

ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು– 560 001

ದೂರವಾಣಿ ಸಂಖ್ಯೆ: 080–22115290 E-mail: kscpcr@gmail.com

**ಡಾ. ತಿಪ್ಪೇಸ್ವಾಮಿ ಕೆ.ಟಿ.** ಸದಸ್ಯರು E-mail: thippeswamykscpcr@gmail.com

ಇವರಿಗೆ ದಿನಾಂಕ: 26–08–2025

ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ.

ಮಾನ್ಯರೇ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ/ ಅರೆ ಸರಕಾರಿ/ ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಅನ್ನು ಕಡ್ಡಾಯವಾಗಿ ಬರೆಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ.

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಕ್ಕಳ ಹಕ್ಕುಗಳ ರಕ್ಷಣೆ ಇಂದಿನ ತುರ್ತು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅನುಷ್ಠಾನಗೊಂಡಿರುವ ಮಿಷನ್ ವಾತ್ಸಲ್ಯ ಯೋಜನೆಯೂ ಮಕ್ಕಳ ಅಭಿವೃದ್ಧಿ ಹಾಗೂ ರಕ್ಷಣೆಯ ಆದ್ಯತೆಯನ್ನು ಸಾಧಿಸುವ ಒಂದು ಮಾರ್ಗವಾಗಿದ್ದು, ಸಂಕಷ್ಟದಲ್ಲಿನ ಹಾಗೂ ಸವಾಲಿನಲ್ಲಿರುವ ಮಕ್ಕಳ ಹಿತರಕ್ಷಣೆಗೆ ಹೆಚ್ಚು ಒತ್ತು ನೀಡುತ್ತಿದೆ. ಇಂತಹ ಮಕ್ಕಳ ಗುರುತಿಸುವಿಕೆ, ಸಂಕಷ್ಟ ಸ್ಥಿತಿಯಲ್ಲಿ ಮಾಹಿತಿ ಹಂಚಿಕೆ ಹಾಗೂ ಪುನರ್ವಸತಿ ಸೇವೆ ಒದಗಿಸುವಲ್ಲಿ ಮಕ್ಕಳ ಸಹಾಯವಾಣಿ 1098 ಮಹತ್ವದ ಪಾತ್ರವಹಿಸುತ್ತದೆ. ಈ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರಮಾಡಿದಲ್ಲಿ ಬಾಲ್ಯವಿವಾಹ, ಬಾಲ ಕಾರ್ಮಿಕತೆ, ಸಂಕಷ್ಟದಲ್ಲಿನ ಮಕ್ಕಳ ರಕ್ಷಣೆ ಸೇರಿದಂತೆ ವಿವಿಧ ರೀತಿಯ ಮಕ್ಕಳ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಸಾಧ್ಯವಾಗಲಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಎಲ್ಲಾ ಸರ್ಕಾರಿ, ಅರೆ ಸರಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸಲು ತಾವು ಸೂಕ್ತ ನಿರ್ದೇಶನ ನೀಡಬೇಕೆಂದು ಕೋರುತ್ತೇನೆ. (ಈಗಾಗಲೇ ಕೆಲವು ಇಲಾಖೆಗಳು ಕ್ರಮವಹಿಸಿವೆ, ಇನ್ನೂ ಕೆಲವು ಕಡೆ ನಮ್ಮ ಇಲಾಖೆಯಲ್ಲಿ ಈ ಬಗ್ಗೆ ಯಾವುದೇ ನಿರ್ದೇಶನವಿಲ್ಲಾ ಎಂಬ ಗೊಂದಲಗಳಿವೆ) ತಮ್ಮ ಈ ನಿರ್ದೇಶನ ಇಡೀ ದೇಶದಲ್ಲಿಯೇ ಒಂದು ಮಾದರಿ ಕ್ರಮವಾಗಲಿದ್ದು ಮಕ್ಕಳ ರಕ್ಷಣೆಗೆ ವೇಗ ತರಲಿದೆ. ಈ ಸಂಬಂಧ ಎಲ್ಲಾ ಇಲಾಖೆಗಳಿಗೂ ಸೂಕ್ತ ನಿರ್ದೇಶನ ನೀಡಬೇಕೆಂದು ತಮ್ಮನ್ನು ವಿನಂತಿಸುತ್ತೇನೆ.

(ಈ ಪತ್ರದೊಂದಿಗೆ ಕೇಂದ್ರ ಸರ್ಕಾರದಿಂದ ಅನುಮೋದಿತವಾದ ಮಕ್ಕಳ ಸಹಾಯವಾಣಿ ಲೋಗೋ ಅನ್ನು ತಮ್ಮ ಅವಗಾಹನೆಗಾಗಿ ಲಗತ್ತಿಸಲಾಗಿದೆ.)

DIPR (UD/RDPR) All HoDs

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ

(ಡಾ. ತಿಪ್ಪೇಸ್ವಾಮಿ ಕೆ.ಟಿ.)

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಕರಾಮಹರಆ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.



File No C 1/194/RIS/2025-COORD-C&I SEC (Computer No 1912271)
Generated from eOffice by VARSHA R, C&I-AST1(VR), ASSISTANT, COMMERCE AND INDUSTRIES SECRETARIAT on 29/04/2026 04:17 PM

1098

CHILD

HELPLINE

24X7



ile No. C I/194/RIS/2025-COORD-C&I SEC (Computer No. 1912271)
enerated from eOffice by VARSHA R, C&I-AST1(VR), ASSISTANT, COMMERCE AND INDUSTRIES SECRETARIAT on 29/04/2025 04:17 PM